ಬೆವಿಕಂ

# ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ

**(ಕರ್ನಾಟಕ ಸರ್ಕಾರದ ಸಂಪೂರ್ಣ ಸ್ವಾಮ್ಯಕ್ಕೊಳಪಟ್ಟಿದೆ)**

BESCOM

ಕ್ರಮಾಂಕ: ಬೆವಿಕಂ/ಬಿಸಿ31/64/2018-19/529

ಕಂಪನಿ ಕಾರ್ಯಾಲಯ,
ಕೆ.ಆರ್.ವೃತ್ತ,
ಬೆಂಗಳೂರು – 560001,
ದಿನಾಂಕ: 11 OCT 2018

## ಸುತ್ತೋಲೆ

ವಿಷಯ: ಬೆವಿಕಂನ ವತಿಯಿಂದ ಏರ್ಪಡಿಸುವ ಸಭೆ-ಸಮಾರಂಭಗಳಲ್ಲಿ ನೀರು ಕುಡಿಯಲು ಪ್ಲಾಸ್ಟಿಕ್ ಬಾಟಲ್ ಬದಲು ಗ್ಲಾಸ್, ಸ್ಟೀಲ್, ಪೇಪರ್ ಲೋಟದಲ್ಲಿ ಒದಗಿಸುವ ಬಗ್ಗೆ.

ಉಲ್ಲೇಖ:
1. ಮಾನ್ಯ ವ್ಯವಸ್ಥಾಪಕ ನಿರ್ದೇಶಕರ, ಬೆವಿಕಂ ರವರ ತಾಂತ್ರಿಕ ಸಹಾಯಕರ ಟಿಪ್ಪಣಿ ಸಂಖ್ಯೆ: BESCOM/BC-1/TA2MD/2018-19/11 ದಿನಾಂಕ 28.05.2018.
2. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಬೆವಿಕಂ/ಬಿಸಿ31/64/2018-19/170 ದಿನಾಂಕ 12.06.2018.
3. ಸರ್ಕಾರದ ಅಧೀನ ಕಾರ್ಯದರ್ಶಿ, ಡಿ.ಪಿ.ಎ.ಆರ್ (ರಾಜಕೀಯ) ರವರ ಆದೇಶ ಸಂಖ್ಯೆ: ಸಿಆಸುಇ 83 ರಾಸವಿ 2018 ಬೆಂಗಳೂರು ದಿನಾಂಕ 05.09.2018.

*****

ಉಲ್ಲೇಖಿತ (1)ರ ಟಿಪ್ಪಣಿಗೆ ಸಂಬಂಧಿಸಿದಂತೆ, ಬೆವಿಕಂನ ಸಭೆಗಳಲ್ಲಿ ಹಾಜರಾಗುವ ಅಧಿಕಾರಿ/ನೌಕರರಿಗೆ ಕುಡಿಯಲು 500 ಮಿ.ಲೀ ನೀರಿನ ಪ್ಲಾಸ್ಟಿಕ್ ಬಾಟಲ್ ಬದಲು ಒಳ್ಳೆಯ ಗುಣಮಟ್ಟವುಳ್ಳ ಪೇಪರ್ ಲೋಟದಲ್ಲಿ ಹಾಗೂ ಲಘು ಉಪಹಾರದ ಬದಲು ತಾಜಾ ಹಣ್ಣುಗಳನ್ನು (Cut Fruits) ನೀಡುವಂತೆ ಉಲ್ಲೇಖ (2)ರ ಸುತ್ತೋಲೆಯಲ್ಲಿ ತಿಳಿಸಿದ್ದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಯಾವುದೇ ಕ್ರಮಕ್ಕೈಗೊಳ್ಳದೆ ಇರುವುದನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ಗಮನಿಸಿರುತ್ತಾರೆ.

ಮುಂದುವರೆದು, ಉಲ್ಲೇಖಿತ (3)ರ ಕರ್ನಾಟಕ ಸರ್ಕಾರದ ಆದೇಶದಲ್ಲಿ ನಿಗಮ/ಸಂಸ್ಥೆಗಳ ವತಿಯಿಂದ ಏರ್ಪಡಿಸಲ್ಪಡುವ ಸಭೆ-ಸಮಾರಂಭಗಳಲ್ಲಿ ಏಕ ಕಾಲಿಕ ಬಳಕೆಯ ಪ್ಲಾಸ್ಟಿಕ್ ಬಾಟಲ್‌ನ **(Single Use Packaged water bottles)** ನೀರಿನ ಬಳಕೆ/ಸರಬರಾಜು ಮಾಡುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಿದೆ. ಇಂತಹ ಸಭೆ-ಸಮಾರಂಭಗಳಲ್ಲಿ ಕುಡಿಯುವ ನೀರನ್ನು ಸಂದರ್ಭಾನುಸಾರ ಶುಚಿತ್ವ ರೀತಿಯಲ್ಲಿ ಗ್ಲಾಸ್, ಸ್ಟೀಲ್, ಪೇಪರ್ ಮತ್ತಿತರ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ಸರಬರಾಜು ಮಾಡಲು ಕ್ರಮ ವಹಿಸತಕ್ಕದ್ದು ಹಾಗೂ ಈ ಆದೇಶಕ್ಕೆ ಲಗತ್ತಿಸಿದ ಅನುಬಂಧ-1 ರಲ್ಲಿರಿಸಿರುವಂತೆ ಸೂಕ್ತ ಸಾಮೂಹಿಕ ಕುಡಿಯುವ ನೀರು ವಿತರಣಾ ವ್ಯವಸ್ಥೆಯನ್ನು **(Common drinking water dispensing system)** ಏರ್ಪಡಿಸತಕ್ಕದ್ದು ಹಾಗೂ ಈ ಸುತ್ತೋಲೆಯ

ನಿರ್ದೇಶನವನ್ನು ತಪ್ಪದೇ, ಬೆವಿಕಂನ ಎಲ್ಲಾ ಅಧಿಕಾರಿಗಳು ತಮ್ಮ ಕಛೇರಿಗಳಲ್ಲಿ ನಡೆಯುವ ಸಭೆ-ಸಮಾರಂಭಗಳಲ್ಲಿ ತಕ್ಷಣದಿಂದ ಪಾಲಿಸುವಂತೆ ಮತ್ತೊಮ್ಮೆ ಸೂಚಿಸಲಾಗಿದೆ. ತಪ್ಪಿದಲ್ಲಿ ಸದರಿ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲಾಗುವುದು.

**ವ್ಯವಸ್ಥಾಪಕ ನಿರ್ದೇಶಕರವರಿಂದ ಅನುಮೋದಿಸಲ್ಪಟ್ಟಿದೆ**

11/10

**(ಡಾ|| ಎಂ.ಮಹೇಶ್, ಕ.ಆ.ಸೇ)**
**ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)**
**ಬೆ.ವಿ.ಕಂ., ಬೆಂಗಳೂರು**

**ಪ್ರತಿಯನ್ನು:-**

1. ಎಲ್ಲಾ ಮುಖ್ಯ ಪ್ರಧಾನ ವ್ಯವಸ್ಥಾಪಕರು, ಕಂಪನಿ ಕಾರ್ಯಾಲಯ, ಬೆ.ವಿ.ಕಂ, ಬೆಂಗಳೂರು.
2. ಎಲ್ಲಾ ಪ್ರಧಾನ ವ್ಯವಸ್ಥಾಪಕರು, ಕಂಪನಿ ಕಾರ್ಯಾಲಯ, ಬೆ.ವಿ.ಕಂ, ಬೆಂಗಳೂರು.
3. ಎಲ್ಲಾ ಅಧಿಕಾರಿಗಳು, ಕಂಪನಿ ಕಾರ್ಯಾಲಯ, ಬೆ.ವಿ.ಕಂ., ಬೆಂಗಳೂರು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕಾ ಮತ್ತು ಪಾ ವಲಯ, ಬೆವಿಕಂ.
5. ಎಲ್ಲಾ ಲೆಕ್ಕನಿಯಂತ್ರಣಾಧಿಕಾರಿಗಳು, ಕಾ ಮತ್ತು ಪಾ ವಲಯ, ಬೆವಿಕಂ.
6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾ. ಮತ್ತು ಪಾ., ಬೆವಿಕಂ.
7. ಎಲ್ಲಾ ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕಾ. ಮತ್ತು ಪಾ., ಬೆವಿಕಂ.
8. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಬೆವಿಕಂ.
9. ಎಲ್ಲಾ ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನೆ/(ಆಂ.ಪ), ಬೆವಿಕಂ.
10. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ, ಬೆವಿಕಂ.
11. ಆಪ್ತ ಕಾರ್ಯದರ್ಶಿಗಳು: ವ್ಯ.ನಿ/ನಿ(ತಾಂ.)/ನಿ(ಹ)/ಕಂ.ಕಾ, ಕಂಪನಿ ಕಾರ್ಯಾಲಯ, ಬೆವಿಕಂ, ಬೆಂಗಳೂರು.
12. ಮುಖ್ಯ ಗುಮಸ್ತರು, ಕಂಪನಿ ಕಾರ್ಯಾಲಯ, ಬೆವಿಕಂ, ಬೆಂಗಳೂರು.
13. ಮುಖ್ಯ ಕಡತ.

**ಪ್ರತಿಗಳು ಮಾಹಿತಿಗಾಗಿ:-**

1. ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ, ಆನಂದರಾವ್ ವೃತ್ತ, ಬೆಂಗಳೂರು.
2. ಅಧ್ಯಕ್ಷರು, ಕೆಇಬಿ, ಇಂಜಿನಿಯರುಗಳ ಸಂಘ, ಆನಂದರಾವ್ ವೃತ್ತ, ಬೆಂಗಳೂರು.
3. ಪ್ರಧಾನ ಕಾರ್ಯದರ್ಶಿ, ಕ.ವಿ.ಪ್ರ.ನಿ. ನೌಕರರ ಸಂಘ/ಕ.ವಿ.ಮಂ ಇಂಜಿನಿಯರುಗಳ ಸಂಘ/ಡಿಪ್ಲೊಮಾ ಇಂಜಿನಿಯರುಗಳ ಸಂಘ/ಕ.ವಿ.ಪ್ರ.ನಿ.ನಿ., ಲೆಕ್ಕಾಧಿಕಾರಿಗಳ ಸಂಘ/ಕ.ವಿ.ಪ್ರ.ನಿ.ನಿ., ಪ.ಜಾತಿ ಮತ್ತು ಪ.ಪಂಗಡಗಳ ಕಲ್ಯಾಣ ಸಂಸ್ಥೆ/ಕವಿಪ್ರನಿನಿ/ಎಸ್ಕಾಂ, ಪ.ಜಾತಿ ಮತ್ತು ಪ.ಪಂಗಡಗಳ ಅಧಿಕಾರಿಗಳ ಸಂಘ, ಬೆಂಗಳೂರು ರವರುಗಳ ಮಾಹಿತಿಗಾಗಿ..